## ಕರ್ನಾಟಕ ರಾಜ್ಯ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘ (ರಿ.), ಬೆಂಗಳೂರು – 23.

**ದಿನಾಂಕ: 01–11–2022**

# ಕರ್ನಾಟಕ ರಾಜ್ಯೋತ್ಸವ ದಿನಾಚರಣೆಯ ಧ್ವಜಾರೋಹಣ ಕಾರ್ಯಕ್ರಮದ ಸಚಿತ್ರಗಳ ಒಂದು ಪಕ್ಷಿ ನೋಟ

ಕರ್ನಾಟಕ ರಾಜ್ಯ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘವು ಕರ್ನಾಟಕ ರಾಜ್ಯೋತ್ಸವ ದಿನಾಚರಣೆಯ ಕಾರ್ಯಕ್ರಮವನ್ನು ದಿನಾಂಕ: 01–11–2022 ರಂದು ಮಂಗಳವಾರದ ಬೆಳಿಗ್ಗೆ 11–00 ಗಂಟೆಯಿಂದ ಸಂಘದ ಧ್ವಜ ಸ್ಥಂಭದ ಬಳಿ ಅಂಗಳದಲ್ಲಿ ಹಮ್ಮಿಕೊಳ್ಳಲಾಗಿತ್ತು.





ಸಂಘದ ಉಪಾಧ್ಯಕ್ಷರು, ಕಾರ್ಯದರ್ಶಿ ಹಾಗೂ ಸಂಘದ ಪದಾಧಿಕಾರಿಗಳು ಹಿರಿಯ ಸದಸ್ಯರುಗಳೊಂದಿಗೆ ದೀಪ ಬೆಳಗಿಸಿ ಭುವನೇಶ್ವರಿ ದೇವಿಯ ಭಾವ ಚಿತ್ರಕ್ಕೆ ಪೂಜಾ ನಮನ ಸಲ್ಲಿಸಿದರು.



ಸಂಘದ ಕಾರ್ಯದರ್ಶಿಯವರಾದ ಶ್ರೀ ಕುಮಾರ ಎಸ್. ಕರನಿಂಗ ರವರು ಕಾರ್ಯಕ್ರಮದಲ್ಲಿ ಭಾಗವಹಿಸಲು ಬಂದಿದ್ದ ಹಿರಿಯ ಸದಸ್ಯರೊಂದಿಗೆ ಎಲ್ಲರನ್ನೂ ಸ್ವಾಗತಿಸಿದರು.











ಸಂಘದ ಹಿರಿಯ ಸದಸ್ಯರಾದ ಶ್ರೀ. ಎಸ್. ಪಿ. ನಾಯಕ್ ಹಾಗೂ ಶ್ರೀ ಸಿ. ಮೋಹನ್ ರವರು ಕಾರ್ಯಕ್ರಮದಲ್ಲಿ ಮಾತನಾಡಿದರು.



ಸಂಘದ ಕಾರ್ಯಕಾರೀ ಸಮಿತಿಯ ಸದಸ್ಯರಾದ ಶ್ರೀ. ಕೆ. ಹೆಚ್. ಜಗದೀಶ್ ರವರು ಕವಿ ಕೆ.ಎಸ್. ನರಸಿಂಹ ಸ್ವಾಮಿಯವರ ಕವನ ವಾಚನ ಮಾಡಿದರು.

ಶ್ರೀ ಚಂದ್ರಕಾಂತ ಎನ್. ಭಂಡಾರಿ, ಎಸ್.ಪಿ. (ನಿವೃತ್ತ) ರವರ ಸಮಾಜಮುಖಿ ಕಾರ್ಯಗಳಿಗಾಗಿ ಸುರಪುರ ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತು ಈ ವರ್ಷ ಅವರಿಗೆ 'ವರ್ಷದ ವ್ಯಕ್ತಿ' ಪುರಸ್ಕಾರ ನೀಡಿ ಗೌರವಿಸಿದೆ. ಈ ಸಂದರ್ಭದಲ್ಲಿ ಮಾನ್ಯರನ್ನು ಸಂಘದ ಕಾರ್ಯದರ್ಶಿಯವರಾದ ಶ್ರೀ ಕುಮಾರ ಎಸ್. ಕರನಿಂಗ ರವರು ಪುಷ್ಪಹಾರ ಹಾಕಿ ಗೌರವಪೂರ್ವಕ ಅಭಿನಂದನೆ ಸಲ್ಲಿಸಿದರು





ಸಂಘದ ನಿಕಟಪೂರ್ವ ಅಧ್ಯಕ್ಷರಾದ ಶ್ರೀ ಎನ್. ನಾಗರಾಜ ರವರೂ ಸಹ ಶ್ರೀ ಚಂದ್ರಕಾಂತ ಎನ್. ಭಂಡಾರಿ, ಎಸ್.ಪಿ. (ನಿವೃತ್ತ) ರವರನ್ನು ಪುಷ್ಪಹಾರ ಹಾಕಿ ಅಭಿನಂದನೆ ಸಲ್ಲಿಸಿದರು

ಸಂಘದ ಕಾರ್ಯಕಾರೀ ಸಮಿತಿಯ ಸದಸ್ಯರಾದ ಶ್ರೀ. ಜಿ. ಎ. ಜಗದೀಶ್ ರವರು ಕಾರ್ಯಕ್ರಮದ ನಿರೂಪಣೆ ಹಾಗೂ ವಂದನಾರ್ಪಣೆ ಮಾಡಿದರು.

ಧ್ವಜಾರೋಹಣಕ್ಕೆ ಆಗಮಿಸಿದ್ದ ಎಲ್ಲರಿಗೂ ಮಾಡಿದ್ದ ಲಘು ಚಹಾ ಉಪಚಾರ.



ಕರ್ನಾಟಕ ರಾಜ್ಯ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಎಲ್ಲರಿಗೂ ವ್ಯವಸ್ಥೆ ಮಾಡಲಾಗಿದ್ದ ಲಘು ಚಹಾ ದೊಂದಿಗೆ ಕಾರ್ಯಕ್ರಮ ಸಂಪೂರ್ಣ ವಾಗಿರುತ್ತದೆ.

NAMASTE

ಕರ್ನಾಟಕ ರಾಜ್ಯ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘ, ಬೆಂಗಳೂರು – 560 023.

* * * * *